All India Radio: Bangalore
National Bulletin In Kannada
24.01.2025 07.35 a.m.
ಆಕಾಶವಾಣಿ, ಬೆಂಗಳೂರು
ರಾಷ್ಟ್ರೀಯ ವಾರ್ತೆಗಳು
*****************

ಮುಖ್ಯಾಂಶಗಳು

೧. ನಾಡಿದ್ದು, ೭೬ನೇ ಗಣರಾಜ್ಯೋತ್ಸವ; ಶಕ್ತಿ, ಸಾಮರ್ಥ್ಯ ಅನಾವರಣಗೊಳಿಸಲು ಭಾರತೀಯ ಸೇನೆ ಸಜ್ಜು

೨. ನವದೆಹಲಿಯಲ್ಲಿಂದು ಕೇಂದ್ರ ಬಜೆಟ್ ಸಿದ್ಧತಾ ಪ್ರಕ್ರಿಯೆಯ ಅಂತಿಮ ಹಂತದ ಹಲ್ವಾ ಸಮಾರಂಭ

೩. ಇಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನ; ಹಕ್ಕುಗಳು, ಶಿಕ್ಷಣ, ಕಲ್ಯಾಣದ ಮೂಲಕ ಸಶಕ್ತೀಕರಣ

೪. ಮಹಿಳಾ ಹಾಕಿ ಇಂಡಿಯಾ ಲೀಗ್; ಫೈನಲ್‌ಗೆ ಅರ್ಹತೆ ಪಡೆದ ಒಡಿಶಾ ವಾರಿಯರ್ಸ್

*****************

ನಾಡಿದ್ದು ನವದೆಹಲಿಯ ಕರ್ತವ್ಯ ಪಥದಲ್ಲಿ ನಡೆಯಲಿರುವ ೭೬ನೇ ಗಣರಾಜ್ಯೋತ್ಸವ ಪ್ರಧಾನ ಸಮಾರಂಭದಲ್ಲಿ ಭಾರತೀಯ ಸೇನೆ ತನ್ನ ಶಕ್ತಿಯನ್ನು ಪ್ರದರ್ಶಿಸಲು ಸಂಪೂರ್ಣವಾಗಿ ಸಜ್ಜಾಗಿದೆ.

ಈ ಕುರಿತು ನವದೆಹಲಿಯಲ್ಲಿ ನಿನ್ನೆ ಮಾಧ್ಯಮಗಳಿಗೆ ಮಾಹಿತಿ ನೀಡಿದ ಮೇಜರ್ ಜನರಲ್ ಸುಮಿತ್ ಮೆಹ್ತಾ, ಈ ಬಾರಿ ಯುದ್ಧಭೂಮಿ ಕಣ್ಗಾವಲು ವ್ಯವಸ್ಥೆ ಮತ್ತು 'ಪ್ರಲೇ' ಶಸ್ತ್ರಾಸ್ತ್ರ ವ್ಯವಸ್ಥೆಯ ಡಿಆರ್‌ಡಿಒ ಚಿತ್ರಣವು ಮೆರವಣಿಗೆಯ ಪ್ರಮುಖ ಆಕರ್ಷಣೆಯಾಗಲಿದೆ ಎಂದು ವಿವರಿಸಿದರು.

ಮೆರವಣಿಗೆಯ ಸಮಯದಲ್ಲಿ, ಭೀಷ್ಮ ಟಿ- ೯೦ ಟ್ಯಾಂಕ್, ನಾಗ್ ಕ್ಷಿಪಣಿ ವ್ಯವಸ್ಥೆ, ಬಜರಂಗ್ ವಿಶೇಷ ಬೆಳಕಿನ ವಾಹನ, ನಂದಿಘೋಷ್ ತುರ್ತು ಪ್ರತಿಕ್ರಿಯೆ ಪಡೆಯ ವಾಹನ, ಬ್ರಹ್ಮೋಸ್, ಅಗ್ನಿಬಾಣ್, ಪಿನಾಕಾ, ಆಕಾಶ್ ಶಸ್ತ್ರಾಸ್ತ್ರ ವ್ಯವಸ್ಥೆ ದೇಶದ ಸೇನಾ ಶಕ್ತಿಯನ್ನು ಪ್ರದರ್ಶಿಸಲಿವೆ. ಅಲ್ಲದೆ, ಸಶಸ್ತ್ರ ಪಡೆಗಳು, ಕೇಂದ್ರ ಸಶಸ್ತ್ರ ಪೊಲೀಸ್ ಪಡೆ ಮತ್ತು ಎನ್‌ಸಿಸಿ ತುಕಡಿಯು ಸಹ ಪಥಸಂಚಲನದಲ್ಲಿ ಭಾಗವಹಿಸಲಿದೆ. ಗಣರಾಜ್ಯೋತ್ಸವ ಮೆರವಣಿಗೆಯು ಇದೇ ೨೬ ರಂದು ಬೆಳಗ್ಗೆ ೧೦:೩೦ ಕ್ಕೆ ಪ್ರಾರಂಭವಾಗಲಿದ್ದು, ೯೦ ನಿಮಿಷಗಳ ಕಾಲ ಮುಂದುವರಿಯಲಿದೆ ಎಂದು ಅವರು ವಿವರಿಸಿದರು.

ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಭಾರತೀಯ ಸೇನಾ ಕವಾಯತಿನ ನೇತೃತ್ವ ವಹಿಸಲಿರುವ ಸಿಗ್ನಲ್ಸ್ ಕಾರ್ಪ್ಸ್‌ನ ಕ್ಯಾಪ್ಟನ್ ರಿತಿಕಾ ಖರೇಟಾ, ಆಕಾಶವಾಣಿಯೊಂದಿಗೆ ಮಾತನಾಡಿ, ಈ ಉತ್ತಮ ಅವಕಾಶವನ್ನು ಒದಗಿಸಿದ್ದಕ್ಕಾಗಿ ಭಾರತೀಯ ಸೇನೆಗೆ ಧನ್ಯವಾದ ಅರ್ಪಿಸಿದರು.

ಇಂಡೋನೇಷ್ಯಾ ತುಕಡಿ ಮತ್ತು ಬ್ಯಾಂಡ್, ಈ ವರ್ಷದ ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದೆ. ಆಕಾಶವಾಣಿಯೊಂದಿಗೆ ಮಾತನಾಡಿದ ಇಂಡೋನೇಷ್ಯಾ ಸೇನೆಯ ಬ್ರಿಗೇಡಿಯರ್ ಕ್ರಿಸ್ಟೋಮಿ ಸಿಯಾಂತುರಿ, ೩೫೨ ಇಂಡೋನೇಷ್ಯಾ ಸೈನಿಕರು ಮೆರವಣಿಗೆಯಲ್ಲಿ ಭಾಗವಹಿಸಲಿದ್ದಾರೆ ಎಂದು ತಿಳಿಸಿದರು.

ಗಣರಾಜ್ಯೋತ್ಸವದ ಮೆರವಣಿಗೆಯಲ್ಲಿ ವಿವಿಧ ರಾಜ್ಯಗಳು, ಕೇಂದ್ರಾಡಳಿತ ಪ್ರದೇಶಗಳು ಮತ್ತು ಕೇಂದ್ರ ಸಚಿವಾಲಯಗಳಿಂದ ಒಟ್ಟು ೨೬ ಸ್ತಬ್ಧಚಿತ್ರಗಳು ದೇಶದ ವೈವಿಧ್ಯತೆ ಮತ್ತು ಸಾಂಸ್ಕೃತಿಕ ಒಳಗೊಳ್ಳುವಿಕೆಯನ್ನು ಪ್ರಸ್ತುತಪಡಿಸಲಿವೆ. 'ಸ್ವರ್ಣಿಮ್ ಭಾರತ್: ವಿರಾಸತ್ ಔರ್ ವಿಕಾಸ್' ಎಂಬ ವಿಷಯವನ್ನು ಆಧರಿಸಿ ಸ್ತಬ್ಧಚಿತ್ರಗಳನ್ನು ರಚಿಸಲಾಗಿದೆ.

*****************

ಪ್ರಧಾನಿ ನರೇಂದ್ರ ಮೋದಿ ಅವರ ಆಹ್ವಾನದ ಮೇರೆಗೆ ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಭಾರತಕ್ಕೆ ಆಗಮಿಸಿದ್ದಾರೆ.

೭೬ನೇ ಗಣರಾಜ್ಯೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿರುವ ಇಂಡೋನೇಷ್ಯಾ ಅಧ್ಯಕ್ಷರು ಕಳೆದ ರಾತ್ರಿ ನವದೆಹಲಿ ತಲುಪಿದರು.

ವಿದೇಶಾಂಗ ವ್ಯವಹಾರಗಳ ರಾಜ್ಯ ಸಚಿವ ಪಬಿತ್ರ ಮಾರ್ಗರಿಟಾ ಅವರು ಇಂಡೋನೇಷ್ಯಾ ಅಧ್ಯಕ್ಷರನ್ನು ದೆಹಲಿಯ ವಿಮಾನ ನಿಲ್ದಾಣದಲ್ಲಿ ಬರಮಾಡಿಕೊಂಡರು.

ಇಂಡೋನೇಷ್ಯಾ ಅಧ್ಯಕ್ಷ ಪ್ರಬೋವೊ ಸುಬಿಯಾಂಟೊ ಅವರು ನಾಲ್ಕು ದಿನಗಳ ಭೇಟಿಯ ಸಮಯದಲ್ಲಿ, ರಾಷ್ಟ್ರಪತಿ ದ್ರೌಪದಿ ಮುರ್ಮು ಮತ್ತು ಪ್ರಧಾನಿ ನರೇಂದ್ರ ಮೋದಿ ಹಾಗೂ ವಿದೇಶಾಂಗ ಸಚಿವ ಡಾ. ಎಸ್. ಜೈಶಂಕರ್ ಅವರನ್ನು ಭೇಟಿ ಮಾಡಲಿದ್ದಾರೆ.

ಈ ನಡುವೆ ಅವರು, ರಾಷ್ಟ್ರಪತಿ ಭವನದಲ್ಲಿ ನಡೆಯುವ ಔಪಚಾರಿಕ ಸ್ವಾಗತ ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ಕಳೆದ ವರ್ಷ ಅಕ್ಟೋಬರ್‌ನಲ್ಲಿ ಅಧಿಕಾರ ವಹಿಸಿಕೊಂಡ ನಂತರ ಅಧ್ಯಕ್ಷ ಪ್ರಬೋವೊ ಅವರ ಮೊದಲ ಭಾರತ ಭೇಟಿ ಇದಾಗಿದೆ.

ಈ ಭೇಟಿಯ ಸಂದರ್ಭದಲ್ಲಿ ಉಭಯ ನಾಯಕರು ದ್ವಿಪಕ್ಷೀಯ ಸಂಬಂಧ, ಪ್ರಾದೇಶಿಕ ಮತ್ತು ಜಾಗತಿಕ ಸಮಸ್ಯೆಗಳನ್ನು ಕುರಿತು ಚರ್ಚೆ ನಡೆಸಲಿದ್ದಾರೆ.

*****************

ಕೇಂದ್ರ ಹಣಕಾಸು ಸಚಿವೆ ನಿರ್ಮಲಾ ಸೀತಾರಾಮನ್ ಅವರು ಕೇಂದ್ರ ಬಜೆಟ್ ಸಿದ್ಧತಾ ಪ್ರಕ್ರಿಯೆಯ ಅಂತಿಮ ಹಂತವಾದ ಹಲ್ವಾ ಸಮಾರಂಭವನ್ನು ನವದೆಹಲಿಯಲ್ಲಿಂದು ನಡೆಸಲಿದ್ದಾರೆ.

ಸಂಪ್ರದಾಯದಂತೆ ನಿರ್ಮಲಾ ಸೀತಾರಾಮನ್ ಅವರೊಂದಿಗೆ ಹಣಕಾಸು ಖಾತೆ ರಾಜ್ಯ ಸಚಿವ ಪಂಕಜ್ ಚೌಧರಿ, ಹಣಕಾಸು ಸಚಿವಾಲಯದ ಕಾರ್ಯದರ್ಶಿಗಳು ಮತ್ತು ಹಿರಿಯ ಅಧಿಕಾರಿಗಳು ಸಮಾರಂಭದಲ್ಲಿ ಭಾಗವಹಿಸಲಿದ್ದಾರೆ. ೨೦೨೫-೨೬ರ ಕೇಂದ್ರ ಬಜೆಟ್ ಅನ್ನು ಫೆಬ್ರವರಿ ತಿಂಗಳ ಮೊದಲ ತಾರೀಖಿನಂದು ಸಂಸತ್ತಿನಲ್ಲಿ ಮಂಡಿಸಲಾಗುವುದು.

ಹಲ್ವಾ ಸಮಾರಂಭ ಹಣಕಾಸು ಸಚಿವಾಲಯದಲ್ಲಿ ಲಾಕ್‌ಡೌನ್ ಆರಂಭವನ್ನು ಸೂಚಿಸುತ್ತದೆ, ಸಮಾರಂಭದ ನಂತರ, ಬಜೆಟ್ ಪ್ರತಿ ಸಿದ್ಧಪಡಿಸುವ ತಂಡದ ಯಾವುದೇ ಅಧಿಕಾರಿ-ಸಿಬ್ಬಂದಿ ಸಚಿವಾಲಯದ ಆವರಣದಿಂದ ಹೊರಹೋಗಲು ಅವಕಾಶವಿಲ್ಲ. ಸಂಸತ್ತಿನಲ್ಲಿ ಕೇಂದ್ರ ಬಜೆಟ್ ಮಂಡಿಸಿದ ನಂತರವೇ ಬಜೆಟ್ ಸಿದ್ಧಪಡಿಸುವ ತಂಡ ಹೊರಗೆ ಬರುತ್ತದೆ.

*****************

ಭಾರತದಲ್ಲಿ ಪ್ರತಿ ವರ್ಷ ಜನವರಿ ೨೪ ರಂದು ರಾಷ್ಟ್ರೀಯ ಹೆಣ್ಣು ಮಕ್ಕಳ ದಿನವನ್ನು ಆಚರಿಸಲಾಗುತ್ತದೆ. ಇದನ್ನು ೨೦೦೮ ರಲ್ಲಿ ಮಹಿಳಾ ಮತ್ತು ಮಕ್ಕಳ ಅಭಿವೃದ್ಧಿ ಸಚಿವಾಲಯ ಮತ್ತು ಭಾರತ ಸರ್ಕಾರವು ಸಮಾಜದಲ್ಲಿ ಹೆಣ್ಣು ಮಕ್ಕಳು ಎದುರಿಸುತ್ತಿರುವ ಅಸಮಾನತೆಗಳ ಬಗ್ಗೆ ಸಾರ್ವಜನಿಕ ಜಾಗೃತಿ ಮೂಡಿಸಲು ಪ್ರಾರಂಭಿಸಿತು. ಈ ದಿನವು ಹೆಣ್ಣುಮಕ್ಕಳನ್ನು ಸಬಲೀಕರಣಗೊಳಿಸಲು ಮತ್ತು ರಕ್ಷಿಸಲು ಅಗತ್ಯವಿರುವ ಸಾಮೂಹಿಕ ಪ್ರಯತ್ನವನ್ನು ನೆನಪಿಸುತ್ತದೆ.

ಪ್ರಯಾಣಿಕರ ಸುರಕ್ಷತೆಯಲ್ಲಿ ಪ್ರಮುಖ ಪಾಲುದಾರರಾಗಿ, ರೈಲ್ವೆ ಸಂರಕ್ಷಣಾ ಪಡೆಯು ಭಾರತೀಯ ರೈಲ್ವೆ ಹೆಣ್ಣು ಮಕ್ಕಳ ಸುರಕ್ಷತೆಯನ್ನು ಖಚಿತಪಡಿಸಿಕೊಳ್ಳುವಲ್ಲಿ ಪ್ರಮುಖ ಪಾತ್ರ ವಹಿಸುತ್ತದೆ. ಪ್ರಮುಖ ನಿಲ್ದಾಣಗಳಲ್ಲಿ ಸಹಾಯವಾಣಿ ವಿಭಾಗಗಳು ಮತ್ತು ದಿನದ ೨೪ ಗಂಟೆಗಳು ಭದ್ರತಾ ಸಹಾಯವಾಣಿಯಂತಹ ಆರ್‌ಪಿಎಫ್ ಉಪಕ್ರಮಗಳು ಸಂಕಷ್ಟದಲ್ಲಿರುವ ಹೆಣ್ಣುಮಕ್ಕಳಿಗೆ ತಕ್ಷಣದ ಸಹಾಯವನ್ನು ಒದಗಿಸುತ್ತವೆ. ಮಕ್ಕಳ ಸಹಾಯವಾಣಿ ಸಂಖ್ಯೆ-೧೦೯೮ ಕ್ಕೆ ಕರೆ ಮಾಡಬಹುದಾಗಿದೆ.

ರೈಲ್ವೆ ರಕ್ಷಣಾ ಪಡೆಯ 'ಆಪರೇಷನ್ ನನ್ಹೆ ಫರಿಶ್ತೆ' ಮೂಲಕ ೨೦೨೪ರಲ್ಲಿ ೪ ಸಾವಿರದ ೪೭೨ ಬಾಲಕಿಯರು ಸೇರಿದಂತೆ ೧೫ ಸಾವಿರದ ೭೦೩ ಮಕ್ಕಳನ್ನು ರಕ್ಷಿಸಲಾಗಿದೆ. ಅಂತೆಯೇ, 'ಮೇರಿ ಸಹೇಲಿ' ಉಪಕ್ರಮದಲ್ಲಿ ರೈಲು ಪ್ರಯಾಣದ ಸಮಯದಲ್ಲಿ ಮಹಿಳೆಯರು ಮತ್ತು ಹೆಣ್ಣು ಮಕ್ಕಳನ್ನು ರಕ್ಷಿಸಲು ಮಹಿಳಾ ಆರ್‌ಪಿಎಫ್ ತಂಡಗಳನ್ನು ನಿಯೋಜಿಸಲಾಗಿದೆ.

'ಬೇಟಿ ಬಚಾವೋ, ಬೇಟಿ ಪಡಾವೋ' ಅಭಿಯಾನಕ್ಕೆ ಅನುಗುಣವಾಗಿ ಹೆಣ್ಣು ಮಕ್ಕಳಿಗೆ ಸುರಕ್ಷಿತ ಮತ್ತು ಸಬಲೀಕರಣದ ವಾತಾವರಣವನ್ನು ಸೃಷ್ಟಿಸಲು ರೈಲ್ವೆ ರಕ್ಷಣಾ ಪಡೆಯು ಬದ್ಧವಾಗಿದೆ ಎಂದು ನೈಋತ್ಯ ರೈಲ್ವೆ ವಿಭಾಗದ ಮುಖ್ಯ ಸಾರ್ವಜನಿಕ ಸಂಪರ್ಕ ಅಧಿಕಾರಿ ಡಾ. ಮಂಜುನಾಥ್ ಕನಮಡಿ ತಿಳಿಸಿದ್ದಾರೆ.

*****************

ಉಪರಾಷ್ಟ್ರಪತಿ ಜಗದೀಪ್ ಧನ್‌ಕರ್ ಅವರು ಇಂದು ಬಿಹಾರಕ್ಕೆ ಭೇಟಿ ನೀಡಲಿದ್ದಾರೆ. ಬಿಹಾರದ ಸಮಸ್ತಿಪುರದಲ್ಲಿ ನಡೆಯಲಿರುವ ಭಾರತ ರತ್ನ ಕರ್ಪೂರಿ ಠಾಕೂರ್ ಅವರ ೧೦೧ನೇ ಜನ್ಮ ದಿನಾಚರಣೆ ಕಾರ್ಯಕ್ರಮದಲ್ಲಿ ಪಾಲ್ಗೊಳ್ಳಲಿದ್ದಾರೆ.

ಕರ್ಪೂರಿ ಗ್ರಾಮದಲ್ಲಿ ಜನ್ಮ ದಿನಾಚರಣೆ ಆಯೋಜಿಸಲಾಗಿದ್ದು, ಸಮಾರಂಭದಲ್ಲಿ ಬಿಹಾರ ರಾಜ್ಯಪಾಲ ಆರೀಫ್ ಮೊಹಮ್ಮದ್ ಖಾನ್, ಮುಖ್ಯಮಂತ್ರಿ ನಿತೀಶ್ ಕುಮಾರ್, ರಾಜ್ಯಸಭೆಯ ಉಪಸಭಾಪತಿ ಹರಿವಂಶ್, ಕೇಂದ್ರ ಕೃಷಿ ಮತ್ತು ರೈತರ ಕಲ್ಯಾಣ ಸಚಿವ ಶಿವರಾಜ್ ಸಿಂಗ್ ಚೌಹಾಣ್, ಕೇಂದ್ರ ಗೃಹ ಖಾತೆ ರಾಜ್ಯ ಸಚಿವ ನಿತ್ಯಾನಂದ ರೈ ಸೇರಿದಂತೆ ಹಲವು ಗಣ್ಯರು ಸಮಾರಂಭದಲ್ಲಿ ಭಾಗಿಯಾಗಲಿದ್ದಾರೆ.

ಜನ್ಮದಿನದ ಅಂಗವಾಗಿ ಸರ್ವಧರ್ಮ ಪ್ರಾರ್ಥನಾ ಸಭೆಯನ್ನು ಸಹ ಆಯೋಜಿಸಲಾಗಿದೆ.

*****************

ಅಮೆರಿಕಾದಲ್ಲಿ ತಮ್ಮ ಉತ್ಪನ್ನಗಳನ್ನು ತಯಾರಿಸಿದರೆ, ಕಡಿಮೆ ತೆರಿಗೆ ವಿಧಿಸುವುದಾಗಿ ಉದ್ಯಮ ನಾಯಕರಿಗೆ ಅಮೆರಿಕಾ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಆಹ್ವಾನ ನೀಡಿದ್ದಾರೆ.

ವಿಶ್ವ ಆರ್ಥಿಕ ವೇದಿಕೆ ಸಭೆಯನ್ನು ವಿಡಿಯೊ ಕಾನ್ಫರೆನ್ಸ್ ಮೂಲಕ ಉದ್ದೇಶಿಸಿ ಮಾತನಾಡಿದ ಟ್ರಂಪ್, ಅಮೆರಿಕಾದಲ್ಲಿ ಉತ್ಪನ್ನಗಳನ್ನು ತಯಾರಿಸದಿದ್ದರೆ ಸುಂಕ ವಿಧಿಸುವುದಾಗಿ ಎಚ್ಚರಿಕೆ ನೀಡಿದ್ದಾರೆ.

ತೈಲ ಬೆಲೆ ತಗ್ಗಿಸುವಂತೆ ಸೌದಿ ಅರೇಬಿಯಾ ಹಾಗೂ ತೈಲ ರಫ್ತು ಮಾಡುವ ದೇಶಗಳ ಸಂಘಟನೆ-ಒಪೆಕ್ ಅನ್ನು ಕೋರುವುದಾಗಿ, ಇದರಿಂದ ರಷ್ಯಾ ಮತ್ತು ಉಕ್ರೇನ್ ನಡುವಣ ಸಂಘರ್ಷ ತಕ್ಷಣವೇ ಅಂತ್ಯಗೊಳ್ಳುತ್ತದೆ ಎಂದು ಅವರು ಹೇಳಿದ್ದಾರೆ.

ಜಾಗತಿಕ ರಕ್ಷಣಾ ವೆಚ್ಚದಲ್ಲಿ ವಿಶೇಷವಾಗಿ ಉಕ್ರೇನ್ ಸಂಘರ್ಷದಲ್ಲಿ ಅಮೆರಿಕಾ ಹೆಚ್ಚಿನ ಹೊರೆ ಹೊರುತ್ತಿದೆ. ನ್ಯಾಟೊ ರಾಷ್ಟ್ರಗಳು ತಮ್ಮ ರಕ್ಷಣಾ ವೆಚ್ಚವನ್ನು ಜಿಡಿಪಿಯ ಶೇಕಡ ೫ ರಷ್ಟು ಹೆಚ್ಚಿಸುವಂತೆಯೂ ಟ್ರಂಪ್ ಕರೆ ನೀಡಿದ್ದಾರೆ.

ಸಂಘರ್ಷದಿಂದಾಗಿ ಅಮೆರಿಕಾ ನ್ಯಾಟೊಗಿಂತ ೨೦೦ ಶತಕೋಟಿ ಡಾಲರ್‌ಗಳನ್ನು ಹೆಚ್ಚು ವೆಚ್ಚ ಮಾಡಿದೆ ಎಂದು ಟ್ರಂಪ್ ತಿಳಿಸಿದ್ದಾರೆ.

ಕಾರ್ಯಕಾರಿ ಆದೇಶಗಳಿಗೆ ಸಹಿ ಹಾಕಿದ ಸಮಾರಂಭದಲ್ಲಿ ನೀಡಿದ್ದ ಹೇಳಿಕೆಗಳನ್ನು ಪುನರುಚ್ಚರಿಸಿದ ಅವರು, ನ್ಯಾಟೊದ ಹಣಕಾಸಿನ ಕೊಡುಗೆಗಳನ್ನು ಒತ್ತಿ ಹೇಳಿದ್ದಾರೆ.

ಪಶ್ಚಿಮ ಏಷ್ಯಾದಲ್ಲಿ ಕದನ ವಿರಾಮ ಮಾತುಕತೆಗಳ ಬಗ್ಗೆಯೂ ಟ್ರಂಪ್ ಮಾತನಾಡಿದರು. ಅಮೆರಿಕಾ ಅಧ್ಯಕ್ಷರಾಗಿ ಎರಡನೇ ಅವಧಿಗೆ ಅಧಿಕಾರವಹಿಸಿಕೊಂಡ ನಂತರ ಅಮೆರಿಕಾದ ದೇಶೀಯ ಹಾಗೂ ಅಂತಾರಾಷ್ಟ್ರೀಯ ನೀತಿಗಳಲ್ಲಿ ಜಾರಿಗೆ ತಂದಿರುವ ತುರ್ತು ಬದಲಾವಣೆಗಳನ್ನು ಒತ್ತಿ ಹೇಳಿದ್ದಾರೆ.

ತಮ್ಮ ಭಾಷಣದಲ್ಲಿ ಟ್ರಂಪ್ ನ್ಯಾಟೊ ದೇಶಗಳು ತಮ್ಮ ರಕ್ಷಣಾ ವೆಚ್ಚವನ್ನು ಹೆಚ್ಚಿಸುವಂತೆ ಒತ್ತಾಯಿಸಿದ್ದಾರೆ.

*****************

ಶಿವಮೊಗ್ಗದಲ್ಲಿ ಎಫ್‌ಎಂ ನೂತನ ಟ್ರಾನ್ಸ್‌ಮೀಟರ್ ಸ್ಥಾಪನೆಯಾಗಿದ್ದು, ಇಲ್ಲಿ ಪ್ರತ್ಯೇಕ ಸ್ಟುಡಿಯೋ ಸ್ಥಾಪಿಸಲಾಗುವುದು ಎಂದು ಕೇಂದ್ರ ವಾರ್ತಾ ಮತ್ತು ಪ್ರಸಾರ ಖಾತೆ ರಾಜ್ಯ ಸಚಿವ ಡಾ. ಎಲ್. ಮುರುಗನ್ ತಿಳಿಸಿದ್ದಾರೆ.

ಶಿವಮೊಗ್ಗದಲ್ಲಿ ನಿನ್ನೆ ಭದ್ರಾವತಿ ಆಕಾಶವಾಣಿಯ ೧೦ ಕೆ.ಡಬ್ಲ್ಯೂ ಎಫ್‌ಎಂ ಟ್ರಾನ್ಸ್‌ಮೀಟರ್‌ಗೆ ಪೂಜೆ ಸಲ್ಲಿಸಿ ಮಾತನಾಡಿದ ಅವರು, ಇದಕ್ಕಾಗಿ ಕೇಂದ್ರ ಸರ್ಕಾರ ಹಣಕಾಸು ನೆರವು ನೀಡಿದೆ ಎಂದು ತಿಳಿಸಿದ್ದಾರೆ.

ಈ ಟ್ರಾನ್ಸ್‌ಮೀಟರ್‌ನಿಂದ ಆಕಾಶವಾಣಿ ಭದ್ರಾವತಿ ವ್ಯಾಪ್ತಿಯು ಶಿವಮೊಗ್ಗ, ದಾವಣಗೆರೆ ಮತ್ತು ಚಿಕ್ಕಮಗಳೂರು ಜಿಲ್ಲೆಗಳೊನ್ನೊಳಗೊಂಡಂತೆ ೬೦ ಕಿಲೋ ಮೀಟರ್‌ಗೂ ಹೆಚ್ಚು ವ್ಯಾಪ್ತಿ ವಿಸ್ತರಿಸಲಿದೆ. ಕರ್ನಾಟಕದ ಸಾಂಸ್ಕೃತಿಕ ಮತ್ತು ಮಾಹಿತಿ ಪ್ರಸಾರ ಕ್ಷೇತ್ರದಲ್ಲಿ ಇದು ಹೊಸ ಮೈಲಿಗಲ್ಲಾಗಲಿದೆ ಎಂದು ಹೇಳಿದ್ದಾರೆ.

ಸಂಸದ ಬಿ.ವೈ.ರಾಘವೇಂದ್ರ ಮಾತನಾಡಿ, ನೂತನ ಟ್ರಾನ್ಸ್‌ಮೀಟರ್‌ನಿಂದ ೬೦ ಕಿಲೋಮೀಟರ್ ವ್ಯಾಪ್ತಿಯಲ್ಲಿ ಕಾರ್ಯಕ್ರಮ ಕೇಳಬಹುದಾಗಿದೆ ಎಂದು ತಿಳಿಸಿದ್ದಾರೆ.

*****************

ಒಡಿಶಾ ವಾರಿಯರ್ಸ್ ತಂಡ ಮಹಿಳಾ ಹಾಕಿ ಇಂಡಿಯಾ ಲೀಗ್ ಉದ್ಘಾಟನಾ ಆವೃತ್ತಿಯ ಫೈನಲ್‌ಗೆ ಅರ್ಹತೆ ಪಡೆದ ಮೊದಲ ತಂಡವಾಗಿದೆ.

ನಿನ್ನೆ ಜಾರ್ಖಂಡ್‌ನ ರಾಂಚಿಯಲ್ಲಿ ದೆಹಲಿ ಎಸ್‌ಜಿ ಪೈಪರ್ಸ್ ವಿರುದ್ಧ ಸೋತರೂ, ಒಡಿಶಾ ವಾರಿಯರ್ಸ್ ಫೈನಲ್‌ಗೆ ಸ್ಥಾನ ಖಚಿತಪಡಿಸಿಕೊಳ್ಳುವಲ್ಲಿ ಯಶಸ್ವಿಯಾಯಿತು.

ನವನೀತ್ ಕೌರ್ ಮತ್ತು ಯಿಬ್ಬಿ ಜಾನ್ಸೆನ್ ಅವರ ಗೋಲುಗಳಿಂದ ನಿಗದಿತ ಸಮಯದ ಅಂತ್ಯದಲ್ಲಿ ಎರಡೂ ತಂಡಗಳು ೧-೧ ಸಮಬಲ ಸಾಧಿಸಿದವು. ಎಲೋಡಿ ಪಿಕಾರ್ಡ್ ಅವರ ಅದ್ಭುತ ಗೋಲು ಮತ್ತು ನವನೀತ್ ಕೌರ್ ಅವರ ನಿರ್ಣಾಯಕ ಪೆನಾಲ್ಟಿ ಸ್ಟ್ರೋಕ್ ಮತ್ತು ಪೆನಾಲ್ಟಿ ಶೂಟೌಟ್‌ನಲ್ಲಿ ಪೈಪರ್ಸ್ ಪಂದ್ಯ ಗೆಲ್ಲಲು ಸಹಾಯ ಮಾಡಿತು.

ಏತನ್ಮಧ್ಯೆ, ಪುರುಷರ ಊ|ಐ ನಲ್ಲಿ, ನಿನ್ನೆ ರಾತ್ರಿ ರೂರ್ಕೆಲಾದ ಬಿರ್ಸಾ ಮುಂಡಾ ಕ್ರೀಡಾಂಗಣದಲ್ಲಿ ನಡೆದ ಪೂಲ್ ಬಿ ಪಂದ್ಯವು ೨-೨ ಡ್ರಾದಲ್ಲಿ ಕೊನೆಗೊಂಡ ನಂತರ, ತಮಿಳುನಾಡು ಡ್ರಾಗನ್ಸ್ ಹೈದರಾಬಾದ್ ಟೂಫ್ಯಾನ್ಸ್ ವಿರುದ್ಧ ಪೆನಾಲ್ಟಿ ಶೂಟೌಟ್ ಅನ್ನು ೪-೩ ಅಂತರದಿಂದ ಗೆದ್ದಿತು. ಬ್ಲೇಕ್ ಗೋವರ್ಸ್ ಮತ್ತು ಜಿಪ್ ಜಾನ್ಸೆನ್ ಡ್ರಾಗನ್ಸ್ ಪರ ಗೋಲು ಗಳಿಸಿದರೆ, ಟಿಮ್ ಬ್ರಾಂಡ್

ಮತ್ತು ಮೈಕೊ ಕ್ಯಾಸೆಲ್ಲಾ ಟೂಫ್ಯಾನ್ಸ್ ಪರ ಗೋಲು ಗಳಿಸಿದರು. ಮೈದಾನದಲ್ಲಿ ಅದ್ಭುತ ಪ್ರದರ್ಶನ ನೀಡಿದ ತಮಿಳುನಾಡು ಡ್ರಾಗನ್ಸ್‌ನ ಅಭರಣ್ ಸುದೇವ್ ಪಂದ್ಯಶ್ರೇಷ್ಠ ಪ್ರಶಸ್ತಿ ಪಡೆದರು.

ಇಂದಿನ ಪಂದ್ಯಗಳಲ್ಲಿ, ಜೆಎಸ್‌ಡಬ್ಲ್ಯೂ ಸೂರ್ಮಾ ಹಾಕಿ ಕ್ಲಬ್ ಸಂಜೆ ೬ ಗಂಟೆಗೆ ಮಹಿಳಾ ಎಚ್‌ಐಎಲ್‌ನಲ್ಲಿ ಶ್ರಾಚಿ ರಾರ್ಹ್ ಬೆಂಗಾಲ್ ಟೈಗರ್ಸ್ ವಿರುದ್ಧ ಆಡಲಿದ್ದು, ರಾತ್ರಿ ೮:೧೫ ಗಂಟೆಗೆ ಪುರುಷರ ಎಚ್‌ಐಎಲ್‌ನಲ್ಲಿ ಶ್ರಾಚಿ ರಾರ್ಹ್ ಬೆಂಗಾಲ್ ಟೈಗರ್ಸ್ ವೇದಾಂತ ಕಳಿಂಗ ಲ್ಯಾನ್ಸರ್ಸ್ ವಿರುದ್ಧ ಆಡಲಿದೆ.

********ಮುಕ್ತಾಯ*******